# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 918 |
| 2 | ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ವಿಷಯ | **ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವ ಬಗ್ಗೆ.** |
| 4 | ಉತ್ತರಿಸುವ ದಿನಾಂಕ | 24.07.2024 |
| 5 | ಉತ್ತರಿಸುವವರು | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |
| | **ಪ್ರಶ್ನೆಗಳು** | **ಉತ್ತರಗಳು** |
| (ಅ) | ರಾಜ್ಯದಲ್ಲಿ ರೇಷ್ಮೆ ಇಲಾಖೆಯ ಸಿಬ್ಬಂದಿ ಕೊರತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಳೆದ **5** ವರ್ಷದ ಅವಧಿಯಲ್ಲಿ ಸರ್ಕಾರದಿಂದ ಎಷ್ಟು ಹುದ್ದೆಗಳನ್ನು ಮಂಜೂರು ಮಾಡಲಾಗಿದೆ: ಮಂಜೂರು ಮಾಡಲಾಗಿರುವ ಅಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ಅಥವಾ ಬಾಕಿ ಇದೆಯೇ: | ಹೌದು ರೇಷ್ಮೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿರುವುದು ಗಮನಕ್ಕೆ ಬಂದಿರುತ್ತದೆ.<br>ಪ್ರಸ್ತುತ ರೇಷ್ಮೆ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಒಟ್ಟು ಸಂಖ್ಯೆ **4299** ಆಗಿದ್ದು, ಈ ಪೈಕಿ **1191** ಹುದ್ದೆಗಳು ಭರ್ತಿಯಾಗಿದ್ದು, **3108** ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ.<br>ಕಳೆದ ಐದು ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ರೇಷ್ಮೆ ಇಲಾಖೆಗೆ ಹೊಸದಾಗಿ ಯಾವುದೇ ಹುದ್ದೆ ಮಂಜೂರಾಗಿರುವುದಿಲ್ಲ.<br>ಆದರೆ ಕಳೆದ ಐದು ವರ್ಷಗಳ ಅವಧಿಯಲ್ಲಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಒಟ್ಟು **23** ಹುದ್ದೆಗಳನ್ನು ಕೆ.ಪಿ.ಎಸ್.ಸಿ ಯಿಂದ ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿರುತ್ತದೆ.<br>ಮತ್ತು ಅನುಕಂಪದ ಆಧಾರದ ನೇಮಕಾತಿಯಲ್ಲಿ ಒಟ್ಟು **93** ಹುದ್ದೆಗಳನ್ನು ಕಳೆದ ಐದು ವರ್ಷಗಳ ಅವಧಿಯಲ್ಲಿ ಭರ್ತಿ ಮಾಡಲಾಗಿರುತ್ತದೆ.<br>ಮುಂದುವರೆದು **2022-23**ನೇ ಸಾಲಿನಲ್ಲಿ ಸ್ಥಳೀಯ ವೃಂದ **06** ಮತ್ತು ಉಳಿದ ಮೂಲ ವೃಂದದ **72** ಹುದ್ದೆಗಳು ಒಟ್ಟು **78** ರೇಷ್ಮೆ ವಿಸ್ತರಣಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದ್ದು, ಈ ಪೈಕಿ ಸ್ಥಳೀಯ ವೃಂದದಲ್ಲಿ ಅರ್ಹರಿದ್ದ **04** ಅಭ್ಯರ್ಥಿಗಳಿಗೆ ದಿನಾಂಕ:**29/06/2024** ರಂದು ನೇಮಕಾತಿ ಆದೇಶ ಹೊರಡಿಸಲಾಗಿರುತ್ತದೆ.<br>ಹಾಗೂ ಉಳಿದ ಮೂಲ ವೃಂದದಲ್ಲಿ **67** ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಆಯೋಗವು ಜಾಲತಾಣದಲ್ಲಿ ಅಭ್ಯರ್ಥಿಗಳ ಮಾಹಿತಿಗೆ ಪ್ರಕಟಿಸಿದ್ದು, ಆಯೋಗದಿಂದ ಆಯ್ಕೆ ಪಟ್ಟಿಯು ಇಲಾಖೆಗೆ ಸ್ವೀಕೃತವಾಗಬೇಕಾಗಿರುತ್ತದೆ. |
| (ಆ) | ಈ ಇಲಾಖೆಗೆ **4299** ಹುದ್ದೆಗಳು ಮಂಜೂರಾಗಿದ್ದು ಇದರಲ್ಲಿ ಕೇವಲ **1300** ಹುದ್ದೆಗಳು ಮಾತ್ರ ಭರ್ತಿ ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| (ಇ) | ಸಿಬ್ಬಂದಿ ಕೊರತೆಯಿಂದ ಇಲಾಖೆ ಅಧಿಕಾರಿಗಳು ಬೆಳೆಗಾರರ ರೇಷ್ಮೆ ಮನೆ, ಹಿಪ್ಪು ನೇರಳೆ ತೋಟಗಳಿಗೆ ಭೇಟಿ ನೀಡಿ ಬೆಳೆಗಾರರಿಗೆ ಸಲಹೆ ನೀಡಬೇಕಾಗಿದ್ದು, ಕೆಲ ಜಿಲ್ಲೆಗಳಲ್ಲಿ ಶೇಕಡ **50**ಕ್ಕೂ ಹೆಚ್ಚು ಸಿಬ್ಬಂದಿ ಕೊರತೆ ಇರುವುದರಿಂದ ಒಬ್ಬರಿಗೆ ಹಲವಾರು ಜವಾಬ್ದಾರಿ ನಿರ್ವಹಿಸುವ ಹೊಣೆಗಾರಿಕೆ ನೀಡಲಾಗುತ್ತಿರುವುದು ನಿಜವೇ: | ಹೌದು, ಸಿಬ್ಬಂದಿ ಕೊರತೆಯಿಂದ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಹೆಚ್ಚುವರಿ ಪ್ರಭಾರ/ಜವಾಬ್ದಾರಿಯನ್ನು ನೀಡಲಾಗಿರುತ್ತದೆ.<br>ರೇಷ್ಮೆ ಭಾಗೀದಾರರಿಗೆ ಸಮಸ್ಯೆ ಆಗುತ್ತಿರುವುದನ್ನು ಗಮನಿಸಿ ರೇಷ್ಮೆ ಇಲಾಖೆಯಲ್ಲಿ ಹಾಲಿ ಲಭ್ಯವಿರುವ ಸಿಬ್ಬಂದಿಗಳ ಸೇವೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಇಲಾಖಾ ಯೋಜನೆಗಳನ್ನು ಹಾಗೂ ಕಾರ್ಯ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| (ಈ) | ಈಗಾಗಲೇ ರಾಜ್ಯದಲ್ಲಿ **1,10,740** ಹೆಕ್ಟೇರ್ ಪ್ರದೇಶದಲ್ಲಿ ಹಿಪ್ಪು ನೇರಳೆ ಬೆಳೆಯುವ ಸುಮಾರು **1.46** ಲಕ್ಷ ರೇಷ್ಮೆ ಬೆಳೆಗಾರರ ಕುಟುಂಬಗಳು ರೇಷ್ಮೆ ಸಾಕಾಣಿಕೆ ಮಾಡುತ್ತಿದ್ದು, ಸಿಬ್ಬಂದಿಗಳ ಕೊರತೆ ಇರುವುದರಿಂದ ಇದರ ಪರಿಣಾಮ ರೇಷ್ಮೆ ಬೆಳೆಗಾರರ ಮೇಲೆ ಬೀರುವುದಿಲ್ಲವೇ? | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರಿಂದ ಹಾಗೂ **108** ಜನ ರೇಷ್ಮೆ ವಿಸ್ತರಣಾ ಕಾರ್ಯಕರ್ತರಿಗೆ ಗೌರವಧನ ನೀಡಿ ಇವರ ಸೇವೆಯನ್ನು ಬಳಸಿಕೊಂಡು ವಿಸ್ತರಣಾ ಚಟುವಟಿಕೆಗಳಿಗೆ ಹೆಚ್ಚಿನ ತೊಂದರೆಯಾಗದಂತೆ ಕ್ರಮ ವಹಿಸಲಾಗುತ್ತಿದೆ.<br>**2023-24** ನೇ ಸಾಲಿನಲ್ಲಿ ರೇಷ್ಮೆ ಇಲಾಖೆಯ **6** ರೇಷ್ಮೆ ತರಬೇತಿ ಸಂಸ್ಥೆಗಳು ಹಾಗೂ ಕರ್ನಾಟಕ ರಾಜ್ಯ ರೇಷ್ಮೆ ಅಭಿವೃದ್ಧಿ ಮತ್ತು ತರಬೇತಿ ಸಂಸ್ಥೆ, ತಲಘಟ್ಟಪುರ ರವರಿಂದ **8923** ಜನ ರೈತರಿಗೆ **1** ದಿನದ ತರಬೇತಿಯನ್ನು ನೀಡಲಾಗಿದ್ದು, ಸದರಿ ತರಬೇತಿಯು ರೇಷ್ಮೆ ವಿಸ್ತರಣಾ ಚಟುವಟಿಕೆಗೆ ಸಹಕಾರಿಯಾಗಿರುತ್ತದೆ. |

ಸಂಖ್ಯೆ: ರೇಷ್ಮೆ 169 ರೇಇವಿ 2024

(ಕೆ. ವೆಂಕಟೇಶ್)

ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು